ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE

# ಹಳ್ಳಿ ಹಕ್ಕಿ ಬೆಂಬಲಕ್ಕೆ ನಿಂತ ಸಚಿವರು

**ಎಚ್.ವಿಶ್ವನಾಥ್ ಸಚಿವರಾಗಲು ಅನರ್ಹ ಎಂದು ಹೈಕೋರ್ಟ್ ವಿಭಾಗೀಯ ಪೀಠ ನೀಡಿದ ಮಧ್ಯಂತರ ಆದೇಶದ ಬೆನ್ನಲ್ಲೇ ಸಚಿವರಾದ ರಮೇಶ ಜಾರಕಿಹೊಳಿ, ಆರ್.ಅಶೋಕ್, ಲಕ್ಷ್ಮಣ ಸವದಿ, ಮಾಧುಸ್ವಾಮಿ, ಗೋಪಾಲಯ್ಯ, ಎಸ್.ಟಿ.ಸೋಮಶೇಖರ್ ಸೇರಿ ಹಲವರು ವಿಶ್ವನಾಥ್ ಬೆಂಬಲಕ್ಕೆ ನಿಂತಿದ್ದಾರೆ. ಕೋರ್ಟ್ ಆದೇಶದ ಬಗ್ಗೆ ಕಾನೂನು ತಜ್ಞರೊಂದಿಗೆ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಲಾಗುವುದು ಎಂದು ರಮೇಶ್ ಜಾರಕಿಹೊಳಿ ಹೇಳಿದರೆ, ವಿಶ್ವನಾಥ್ ಧೃತಿಗೆಡುವುದು ಬೇಡ. ನಾವೆಲ್ಲ ಅವರ ಜೊತೆಗಿದ್ದೇವೆ ಎಂದು ಕಂದಾಯ ಸಚಿವ ಆರ್. ಅಶೋಕ್ ಭರವಸೆಯ ಮಾತನಾಡಿದ್ದಾರೆ.**

## ಮತ್ತೆ ನ್ಯಾಯಾಲಯದ ಮೊರೆ ಹೋಗುತ್ತೇವೆ: ಸಚಿವ ಅಶೋಕ್

**ಚಾಮರಾಜನಗರ:** ವಿಧಾನ ಪರಿಷತ್ ಸದಸ್ಯ ಎಚ್. ವಿಶ್ವನಾಥ್ ಅವರು ನೋವಿನಿಂದ ಮಾತನಾಡಿದ್ದಾರೆ. ಹಿರಿಯ ವಕೀಲರು ವಾದ ಮಾಡಿದ್ದಾರೆ. ಆದರೆ, ಸುಪ್ರೀಂಕೋರ್ಟ್ ಆದೇಶ ಏನು ಬಂದಿತ್ತೋ ಅದರ ಪ್ರಕಾರ ಹೈಕೋರ್ಟ್ ತೀರ್ಪು ಬಂದಿದೆ. ನಾವು ಮತ್ತೆ ನ್ಯಾಯಾಲಯದ ಮೊರೆ ಹೋಗುತ್ತೇವೆ. ವಿಶ್ವನಾಥ್ ಧೃತಿಗೆಡುವುದು ಬೇಡ. ನಾವೆಲ್ಲ ಅವರ ಜೊತೆಗಿದ್ದೇವೆ ಎಂದು ಕಂದಾಯ ಸಚಿವ ಆರ್. ಅಶೋಕ್ ತಿಳಿಸಿದ್ದಾರೆ.



ಕೊಳ್ಳೇಗಾಲದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ವಿಶ್ವನಾಥ್ ಚುನಾವಣೆಯಲ್ಲಿ ಸೋತರೂ ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡಿದ್ದೇವೆ. ಮಂತ್ರಿ ಆಗಬೇಕೆಂಬುದು ಅವರ ಬಯಕೆಯಾಗಿತ್ತು. ಯಡಿಯೂರಪ್ಪನವರು ಸಹ ಅವರನ್ನು ಮಂತ್ರಿ ಮಾಡ ಬೇಕೆಂದು ನಮ್ಮ ಜೊತೆ ಮಾತನಾಡಿದ್ದಾರೆ. ಈಗಾಗಲೇ ಕೇಂದ್ರಕ್ಕೆ ಪಟ್ಟಿ ಕೂಡ ಹೋಗಿದೆ. ವಿಶ್ವನಾಥ್ ಧೃತಿಗೆಡುವುದು ಬೇಡ. ನೋವಿನಲ್ಲಿ ಕೆಲವು ಮಾತನಾಡಿದ್ದಾರೆ. ನಾವೆಲ್ಲ ಅವರ ಜೊತೆ ಮಾತನಾಡುತ್ತೇವೆ ಎಂದರು. ಸಹಕಾರ ಸಚಿವ ಎಸ್. ಟಿ. ಸೋಮಶೇಖರ್ ಮತ್ತು ಆಹಾರ ಸಚಿವ ಗೋಪಾಲಯ್ಯ ಮಾತನಾಡಿ, ಎಚ್.ವಿಶ್ವನಾಥ್ ಅವರಿಗೆ ಹೀಗಾಗಿರುವುದರಿಂದ, ನಮಗೆ ಬೇಜಾರಾಗಿದೆ. ಸರ್ಕಾರ ಮತ್ತು ಪಕ್ಷ ಅವರ ಜೊತೆಗಿದೆ. ಅವರು ಧೃತಿಗೆಡುವುದು ಬೇಡ. ಬೆಂಗಳೂರಿಗೆ ಹೋದ ಮೇಲೆ ಅವರ ಜೊತೆ ನಾವೆಲ್ಲ ಮಾತನಾಡುತ್ತೇವೆ ಎಂದು ಹೇಳಿದರು.

## ರಾಜಕಾರಣದಲ್ಲಿ ಯಾವ ಶಾಪವೂ ತಟ್ಟಲ್ಲ: ರಮೇಶ

**ಬೆಳಗಾವಿ:** ರಾಜಕಾರಣದಲ್ಲಿ ಯಾವ ಶಾಪವೂ ತಟ್ಟುವುದಿಲ್ಲ ಎಂದು ಜಲಸಂಪನ್ಮೂಲ ಸಚಿವ ರಮೇಶ ಜಾರಕಿಹೊಳಿ ಶಾಸಕ ಸಾ.ರಾ ಮಹೇಶಗೆ ತಿರುಗೇಟು ನೀಡಿದ್ದಾರೆ. ಸುದ್ದಿಗಾರರ ಜತೆ ಮಾತನಾಡಿ, ಸಾ.ರಾ.ಮಹೇಶ ಒಬ್ಬ ಮನುಷ್ಯನಾಗಿ ಹೀಗೆ ಮಾತನಾಡಬಾರದು. ನಮ್ಮ ಯಾವುದೇ ವೈರಿಗೆ ಕೆಟ್ಟದ್ದಾದರೂ ನಾವು ಸಹಾನುಭೂತಿ ತೋರಿಸಬೇಕು. ರಾಜಕಾರಣದಲ್ಲಿ ಇರಲು ಸಾ.ರಾ.ಮಹೇಶ ಲಾಯಕ್ಕಲ್ಲ. ಎಚ್.ವಿಶ್ವನಾಥ್ ಸಚಿವರಾಗಲು ಸಾಧ್ಯವಿಲ್ಲ ಎಂದು ಹೈಕೋರ್ಟ್ ನೀಡಿದ ತೀರ್ಪಿನ ಕುರಿತು ತಕ್ಷಣ ಎಲ್ಲಾ ಮಿತ್ರಮಂಡಳಿ ಶಾಸಕರು ಹಾಗೂ ಬಿಜೆಪಿ ಶಾಸಕರು ಸೇರಿ ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿಕೊಳ್ಳುತ್ತೇವೆ. ಈಗಾಗಲೇ ಬೆಂಗಳೂರು ಹಾಗೂ ದೆಹಲಿ ವಕೀಲರ ಜತೆ ಮಾತನಾಡಿದ್ದೇನೆ ಎಂದರು.

**" ಹೈಕೋರ್ಟ್ ತೀರ್ಪು ನಮಗೂ ಅಚ್ಚರಿ ಉಂಟು ಮಾಡಿದೆ. ಆದರೆ, ಮುಖ್ಯಮಂತ್ರಿಗಳು ಎಚ್.ವಿಶ್ವನಾಥ್ ಅವರಿಗೆ ಸ್ಥಾನಮಾನ ಕಲ್ಪಿಸಿಕೊಡಲು ನ್ಯಾಯಾಲಯದ ಮೊರೆ ಹೋಗಿ ಕ್ರಮ ಕೈಗೊಳ್ಳುವ ವಿಶ್ವಾಸವಿದೆ.**

• **ಬಿ.ವೈ.ವಿಜಯೇಂದ್ರ**, ಬಿಜೆಪಿ ರಾಜ್ಯ ಉಪಾಧ್ಯಕ್ಷ

**" ಸುಪ್ರೀಂಕೋರ್ಟ್‌ನಲ್ಲಿ ವಿಶ್ವನಾಥ್ ಪರ ಅಪೀಲು ಮಾಡುವ ಮೂಲಕ ಅವರಿಗೆ ನ್ಯಾಯ ಸಿಗುವ ಪ್ರಯತ್ನ ಮಾಡುತ್ತೇವೆ. ಸಿ.ಪಿ. ಯೋಗೇಶ್ವರ್ ಅವರೇ ನನ್ನ ಸೋಲಿಗೆ ಕಾರಣ ಎಂದಿರುವ ವಿಶ್ವನಾಥ ಹೇಳಿಕೆ ವೈಯಕ್ತಿಕ. ಆದರೆ ಅವರಿಗೆ ಬಿಜೆಪಿ ನ್ಯಾಯ ಕೊಡಿಸುವ ಕೆಲಸ ಮಾಡಲಿದೆ.**

• **ಲಕ್ಷ್ಮಣ ಸವದಿ**, ಉಪಮುಖ್ಯಮಂತ್ರಿ

**" ವಿಶ್ವನಾಥ್ ಅವರಿಗೆ ಯಾವುದೇ ಅನ್ಯಾಯ ಆಗಿಲ್ಲ. ಅವರಿಗೆ ಅನ್ಯಾಯವಾದರೆ ಖಂಡಿತ ವಾಗಿಯೂ ನಾವು ಅವರ ಬೆನ್ನಿಗೆ ನಿಲ್ಲಲಿದ್ದೇವೆ. ಅವರಿಗೆ ಸಚಿವ ಸ್ಥಾನ ಕೊಡುವುದು ವಿಳಂಬವಾಗಿದ್ದಕ್ಕೆ ಕೆಲವೊಂದು ಮಾತು ಆಡಿರ ಬಹುದು. ನಾವೆಲ್ಲರೂ ಅವರ ಹಿಂದಿದ್ದೇವೆ.**

• **ಆನಂದ್‌ಸಿಂಗ್**, ಅರಣ್ಯ ಸಚಿವ

## ಚಾಮುಂಡಿಬೆಟ್ಟದಲ್ಲಿ ಹರಕೆ ತೀರಿಸಿದ ಸಾ.ರಾ. ಮಹೇಶ್

**ಮೈಸೂರು:** ನನ್ನ ಹಾಗೂ ನನ್ನ ಕಾರ್ಯಕರ್ತರ ನಿಟ್ಟುಸಿರಿನಿಂದ ಎಚ್.ವಿಶ್ವನಾಥ್ ಅವರಿಗೆ ನ್ಯಾಯದೇವತೆ ಶಿಕ್ಷೆ ನೀಡಿದ್ದಾರೆಂದು ಶಾಸಕ ಸಾ.ರಾ.ಮಹೇಶ್ ಹೇಳಿದರು. ಎಚ್.ವಿಶ್ವನಾಥ್ ಸಚಿವರಾಗಲು ಅನರ್ಹ ಎಂದು ಹೈಕೋರ್ಟ್ ವಿಭಾಗೀಯ ಪೀಠ ಸೋಮವಾರ ಮಧ್ಯಂತರ ತೀರ್ಪು ನೀಡಿತ್ತು. ಈ ಹಿನ್ನೆಲೆಯಲ್ಲಿ ಶಾಸಕ ಸಾ.ರಾ.ಮಹೇಶ್ ಮಂಗಳವಾರ ಬೆಳಗ್ಗೆ ಚಾಮುಂಡಿಬೆಟ್ಟಕ್ಕೆ ತೆರಳಿ ಚಾಮುಂಡೇಶ್ವರಿಗೆ 1001 ರೂ. ತಪ್ಪು ಕಾಣಿಕೆ ಸಲ್ಲಿಸಿ, ಇಡುಗಾಯಿ ಹೊಡೆದು ಆಣೆ-ಪ್ರಮಾಣದ ಹರಕೆ ತೀರಿಸಿದರು. ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿ, ಚಾಮುಂಡಿ ತಾಯಿ ನ್ಯಾಯದೇವತೆ ತಪ್ಪು ಮಾಡಿದವರಿಗೆ ಶಿಕ್ಷೆ ಕೊಟ್ಟಿದ್ದಾಳೆ. ನಾನು ದೇವಾಲಯದಲ್ಲಿ ಕಣ್ಣೀರಿಟ್ಟು ತಪ್ಪು ಯಾರದ್ದು ಸರಿಯಾರದ್ದು ಎಂದು ನೀನೇ ತೋರಿಸು ತಾಯಿ ಎಂದು ಕೇಳಿದ್ದೆ. ಪ್ರಸಂಗ ನಡೆದು ಸರಿಯಾಗಿ ಒಂದು ವರ್ಷಕ್ಕೆ ನ್ಯಾಯದೇವತೆ ತೀರ್ಪು ಕೊಟ್ಟಿದ್ದಾಳೆ ಎಂದು ತಿಳಿಸಿದರು.

**" ಬಿಜೆಪಿಯ ಸಚಿವ ಸ್ಥಾನದ ಪ್ರಬಲ ಆಕಾಂಕ್ಷಿಯಾದ ಶಾಸಕರೊಬ್ಬರು ವಿಶ್ವನಾಥ್ ಮೇಲ್ಮನೆ ಸದಸ್ಯರಾಗಿ ನಾಮನಿರ್ದೇಶನ ಮಾಡಿದ್ದನ್ನು ಪ್ರಶ್ನಿಸಿ ಹೈಕೋರ್ಟ್‌ನಲ್ಲಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರಿಂದ ವಿಶ್ವನಾಥ್‌ಗೆ ಅತಂತ್ರ ಸ್ಥಿತಿ ನಿರ್ಮಾಣ ವಾಗಿದೆ. ಇದರಿಂದ ಬಿಜೆಪಿಯವರು ಒಳಗೊಳಗೆ ಖುಷಿಪಟ್ಟಿದ್ದಾರೆ.**

• **ಸಾ.ರಾ.ಮಹೇಶ್**, ಶಾಸಕ

## ವಿಶ್ವನಾಥ್‌ಗೆ ಮೋಸ ಮಾಡಲ್ಲ: ಮಾಧುಸ್ವಾಮಿ



**ಚಿಕ್ಕಮಗಳೂರು:** ಎಚ್.ವಿಶ್ವನಾಥ್ ಅವರಿಗೆ ಸಚಿವ ಸ್ಥಾನ ನೀಡುವ ವಿಚಾರ ನ್ಯಾಯಾಲಯದ ತೀರ್ಪಿಗೆ ನಾವು ಹೊಣೆಯಲ್ಲ, ಅವರಿಗೆ ನಾವು ಮೋಸ ಮಾಡಲ್ಲ, ಅವರ ಪರ ಇದ್ದೇವೆ ಎಂದು ಕಾನೂನು ಸಚಿವ ಮಾಧುಸ್ವಾಮಿ ಹೇಳಿದರು. ಬೀರೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ರಾಜ್ಯದಲ್ಲಿ ಬಿಜೆಪಿ ಸರ್ಕಾರ ಬರುವಲ್ಲಿ ಅವರ ಪಾತ್ರವೂ ಇದೆ. ನಮ್ಮ ಜತೆ ಬಂದವರ ಬೆನ್ನಿಗೆ ಚೂರಿ ಹಾಕಲ್ಲ, ಚುನಾವಣೆಯಲ್ಲಿ ಸೋತರೂ ಪಕ್ಷ ಎಂಎಲ್‌ಸಿ ಮಾಡಿದೆ. ಅಡ್ವೋಕೇಟ್ ಜನರಲ್ ಮತ್ತು ಪಕ್ಷದ ಮುಖಂಡರು ಏನೆಲ್ಲಾ ಮಾಡಲು ಸಾಧ್ಯವಿದೆಯೋ ಅದನ್ನು ಮಾಡಿದ್ದೇವೆ. ಅದನ್ನೂ ಮೀರಿ ನ್ಯಾಯಾಲಯ ತೀರ್ಪಿಗೆ ಯಾರನ್ನೂ ದೂಷಿಸಲು ಸಾಧ್ಯವಿಲ್ಲ. ವಿಶ್ವನಾಥ್ ಪರ ನಾವು ಮತ್ತೊಂದು ಪ್ರಯತ್ನ ಮಾಡುತ್ತೇವೆ. ತೀರ್ಪಿನ ವಿರುದ್ಧ ಮತ್ತೆ ಅಪೀಲು ಸಲ್ಲಿಸುತ್ತೇವೆ ಎಂದರು.